## ನಿಮ್ಮೊಡನೆ

# ಸರ್ಕಾರಿ ಶಾಲೆಗಳಿಗೆ ಬರಲಿ ‘ಅಮೃತ’ ಬಲ

**ಸರ್ಕಾರಿ ಶಾಲೆಗಳ ಅಡಿಪಾಯ ವರ್ಷದಿಂದ ವರ್ಷಕ್ಕೆ ದುರ್ಬಲವಾಗುತ್ತಿದೆ. ಸರ್ಕಾರಿ ಶಾಲೆಗಳು ಬಲಗೊಂಡು ಸಾರ್ವಜನಿಕ ಶಿಕ್ಷಣದಲ್ಲಿ ಸಮಾನತೆ ಸಾಧ್ಯವಾಗದೆ ಹೋದರೆ, ಸ್ವಾತಂತ್ರ್ಯ–ಸಮಾನತೆಯಂತಹ ಆದರ್ಶಗಳು ಘೋಷಣೆಗಳಲ್ಲಷ್ಟೇ ಉಳಿಯಲಿವೆ.**

ಇಡೀ ದೇಶ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ಸಂಭ್ರಮದಲ್ಲಿದ್ದರೆ, ರಾಜ್ಯದ ಸರ್ಕಾರಿ ಶಾಲೆಗಳು ಎಂದಿನಂತೆ ತಮ್ಮ ಅಡಿಪಾಯ ಅಲುಗಾಡುತ್ತಿರುವ ಆತಂಕವನ್ನು ಎದುರಿಸುತ್ತಿವೆ. ಮಕ್ಕಳ ಕೊರತೆಯ ನೆಪವೊಡ್ಡಿ ಪ್ರತಿ ವರ್ಷವೂ ನೂರಾರು ಕನ್ನಡ ಶಾಲೆಗಳ ಬಾಗಿಲು ಮುಚ್ಚಲಾಗುತ್ತಿದೆ. ಸಾರ್ವಜನಿಕ ಶಿಕ್ಷಣವನ್ನು ಬಲಪಡಿಸಬೇಕಾದ ಸರ್ಕಾರವೇ, ಸರ್ಕಾರಿ ಶಾಲೆಗಳು ದುರ್ಬಲಗೊಳ್ಳುವುದನ್ನು ಅಸಹಾಯಕತೆಯಿಂದ ನೋಡುತ್ತಿದೆ.

ರಾಜ್ಯದಲ್ಲಿನ ಒಟ್ಟು 48,285 ಸರ್ಕಾರಿ ಶಾಲೆಗಳಿವೆ. ಅವುಗಳಲ್ಲಿ 13 ಸಾವಿರ ಶಾಲೆಗಳಲ್ಲಿ 25ಕ್ಕೂ ಕಡಿಮೆ ಮಕ್ಕಳಿದ್ದಾರೆ. 1812 ಶಾಲೆಗಳಲ್ಲಿ 10ಕ್ಕೂ ಕಡಿಮೆ ಮಕ್ಕಳಿದ್ದಾರೆ. ಈ 13,812 ಶಾಲೆಗಳನ್ನು ಸಮೀಪದ ಶಾಲೆಗಳೊಂದಿಗೆ ವಿಲೀನಗೊಳಿಸುವ ಮಾತು ಕೇಳಿಬರುತ್ತಿದೆ. ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಿರುವ ಶಾಲೆಗಳನ್ನು ಮುಚ್ಚುವ ನಿರ್ಧಾರ ವ್ಯಾವಹಾರಿಕ ದೃಷ್ಟಿಯಿಂದ ಸರಿ. ಆದರೆ, ಮಕ್ಕಳ ಕಲಿಕೆ ಮತ್ತು ಭಾಷೆಯ ಹಿತಾಸಕ್ತಿ ಲಾಭ–ನಷ್ಟದ ದೃಷ್ಟಿಯಿಂದ ನೋಡುವ ಸಂಗತಿಗಳಲ್ಲ. ಸರ್ಕಾರಿ ಶಾಲೆಗಳನ್ನು ಮುಚ್ಚುವುದರಿಂದ ಹೆಚ್ಚು ತೊಂದರೆ ಅನುಭವಿಸುವುದು ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳು, ವಿಶೇಷವಾಗಿ ಬಡ ಸಮುದಾಯಗಳ ಮಕ್ಕಳು. ಸರ್ಕಾರಿ ಶಾಲೆಗಳ ಸಂಖ್ಯೆ ಕಡಿಮೆಯಾಗುತ್ತಾ ಹೋದಂತೆ, ಶಿಕ್ಷಣ ಕ್ಷೇತ್ರದಲ್ಲಿ ಅಸಮಾನತೆಯೂ ಹೆಚ್ಚುತ್ತಾ ಹೋಗುತ್ತದೆ. ಸರ್ಕಾರಿ ಶಾಲೆಗಳು ಮಕ್ಕಳಿಗೆ ಕಲಿಕೆಯ ಕೇಂದ್ರಗಳಾಗಿರುವುದರ ಜೊತೆಗೆ, ಸಾಮಾಜಿಕ ನ್ಯಾಯ ದೊರಕಿಸಿಕೊಡುವ ವೇದಿಕೆಗಳೂ ಆಗಿವೆ. ಸಮೀಪದ ಶಾಲೆಗಳಿಗೆ ಹುಡುಗಿಯರನ್ನು ಕಳುಹಿಸಲು ಹಿಂಜರಿಯುವ ಪೋಷಕರು ಇರುವ ಸಂದರ್ಭದಲ್ಲಿ, ಶಾಲೆಗಳು ಮತ್ತಷ್ಟು ದೂರವಾದರೆ ಶಿಕ್ಷಣದಿಂದ ವಂಚಿತರಾಗುವ ಹೆಣ್ಣುಮಕ್ಕಳ ಸಂಖ್ಯೆಯೂ ಹೆಚ್ಚುತ್ತದೆ.

ಶಾಲೆ ಮತ್ತು ಶಿಕ್ಷಣ ಮಕ್ಕಳ ಮನಸ್ಸಿಗೆ ಯಾವುದೇ ಕಾರಣಕ್ಕೂ ‘ದೂರ’ ಎನ್ನಿಸಬಾರದು. ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ತಲಾ ಒಂದು ಮಾದರಿ ಶಾಲೆಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆ ಎಂದು ಶಿಕ್ಷಣ ಸಚಿವ ಬಿ.ಸಿ. ನಾಗೇಶ್ ಹೇಳಿದ್ದಾರೆ. ಮಾದರಿ ಶಾಲೆಗಳನ್ನು ರೂಪಿಸುವ ಉದ್ದೇಶ ಸ್ವಾಗತಾರ್ಹ. ಆದರೆ, ಮಾದರಿ ಶಾಲೆಗಳ ಜೊತೆಗೆ ಈಗಿರುವ ಶಾಲೆಗಳನ್ನು ಉಳಿಸಿಕೊಳ್ಳುವುದೂ ಅಗತ್ಯ. ವಾಸಿಸುವ ಊರಿನಲ್ಲಿಯೇ ಮಗುವಿನ ಕಲಿಕೆಗೆ ಅವಕಾಶ ದೊರೆಯಬೇಕು. ಶಾಲೆಗಾಗಿ ಮತ್ತೊಂದು ಊರಿಗೆ ವಿದ್ಯಾರ್ಥಿಗಳು ಪ್ರತಿದಿನ ಪ್ರಯಾಣಿಸಬೇಕಾದ ಸ್ಥಿತಿಯನ್ನು ಸರ್ಕಾರ ಸೃಷ್ಟಿಸಬಾರದು.

ಶಾಲೆಗಳನ್ನು ಉಳಿಸಿಕೊಳ್ಳುವುದೆಂದರೆ ಕನ್ನಡ ಮಾಧ್ಯಮವನ್ನು, ಆ ಮೂಲಕ ಕನ್ನಡ ನುಡಿಯನ್ನು ಉಳಿಸಿ ಬೆಳೆಸುವ ಕೆಲಸವೂ ಹೌದು. ಕನ್ನಡದ ಹಿತಾಸಕ್ತಿಯ ವಿಷಯದಲ್ಲಿ ಯಾವ ರಾಜಿಯೂ ಇಲ್ಲ ಎಂದು ಹೇಳುತ್ತಲೇ ಬಂದಿರುವ ಸರ್ಕಾರಗಳು, ಶಾಲೆಗಳನ್ನು ಮುಚ್ಚುವ ಮೂಲಕ ಮಾತಿಗೂ ಕೃತಿಗೂ ಸಂಬಂಧವಿಲ್ಲದಂತೆ ನಡೆದುಕೊಳ್ಳುತ್ತಿವೆ. ಈ ಧೋರಣೆ ಇನ್ನು ಮೇಲಾದರೂ ಬದಲಾಗಬೇಕು. ವಿದ್ಯಾರ್ಥಿಗಳ ಕೊರತೆ ಇರುವ ಶಾಲೆಗಳನ್ನು ಮುಚ್ಚುವುದು ಸಮಸ್ಯೆ ಬಗೆಹರಿಸುವ ರೀತಿಯಲ್ಲ. ಸಮಸ್ಯೆಗೆ ಉತ್ತರ ಕಂಡುಕೊಳ್ಳುವ ದಾರಿಗಳನ್ನು ಸರ್ಕಾರ ಯೋಚಿಸಬೇಕಾಗಿದೆ. ಮಕ್ಕಳು ಬಾರದ ಶಾಲೆಗಳನ್ನು ಮುಚ್ಚುವ ಚಿಂತನೆಯಲ್ಲಿ ರಾಜಕೀಯ ಮುತ್ಸದ್ದಿತನವೂ ಇಲ್ಲ, ಮಕ್ಕಳ ಶೈಕ್ಷಣಿಕ ಹಿತಾಸಕ್ತಿಯೂ ಅಡಗಿಲ್ಲ. ಕನ್ನಡ ಶಾಲೆಗಳ ಆರೋಗ್ಯ ಚೆನ್ನಾಗಿದ್ದಾಗಷ್ಟೇ ನಾಡಿನ ಕ್ಷೇಮವೂ ಸಾಧ್ಯ ಎನ್ನುವುದನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕಿದೆ; ವ್ಯಾವಹಾರಿಕ ದೃಷ್ಟಿಕೋನವನ್ನು ಬಿಟ್ಟುಕೊಟ್ಟು, ಸರ್ಕಾರಿ ಶಾಲೆಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಬೇಕಾಗಿದೆ.

ಮಕ್ಕಳನ್ನು ಶಾಲೆಗೆ ಆಕರ್ಷಿಸಲಿಕ್ಕೆ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಬೇಕಾದುದು ಸರ್ಕಾರದ ಕರ್ತವ್ಯ. ಸರ್ಕಾರಿ ಅಧಿಕಾರಿಗಳು ಹಾಗೂ ಜನ ಪ್ರತಿನಿಧಿಗಳು ಶಾಲೆಗಳನ್ನು ದತ್ತು ಪಡೆಯುವ ಯೋಜನೆ ಈಗಾಗಲೇ ಜಾರಿಯಲ್ಲಿದೆ. ಸರ್ಕಾರಿ ಶಾಲೆಗಳ ಸಂರಕ್ಷಣೆಯ ಪ್ರಯತ್ನಗಳಲ್ಲಿ ಕಾರ್ಪೊರೇಟ್ ಸಂಸ್ಥೆಗಳು ಹಾಗೂ ಜನಪ್ರಿಯ ಸಿನಿಮಾ ನಟ–ನಟಿಯರು ಕೈಜೋಡಿಸಿದ್ದಾರೆ. ಇಂಥ ಪ್ರಯತ್ನಗಳು ಮತ್ತಷ್ಟು ವ್ಯಾಪಕವಾಗಬೇಕು. ತಮ್ಮ ಕ್ಷೇತ್ರದ ಶಾಲೆಗಳನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಜನ ಪ್ರತಿನಿಧಿಗಳು ವಿಶೇಷ ಆಸಕ್ತಿ ವಹಿಸಬೇಕು. ಸರ್ಕಾರಿ ಶಾಲೆಗಳಲ್ಲಿನ ಮೂಲಭೂತ ಸೌಕರ್ಯಗಳು ಉತ್ತಮಗೊಂಡು, ಶಿಕ್ಷಕರ ಕೊರತೆ ನೀಗಿದಲ್ಲಿ ಮಕ್ಕಳು ಸರ್ಕಾರಿ ಶಾಲೆಗಳತ್ತ ಸಹಜವಾಗಿಯೇ ಆಕರ್ಷಿತರಾಗುತ್ತಾರೆ. ಯಾವುದಾದರೂ ಸರ್ಕಾರಿ ಶಾಲೆ ವಿದ್ಯಾರ್ಥಿಗಳ ಕೊರತೆಯನ್ನು ಎದುರಿಸುತ್ತಿದೆಯೆಂದರೆ, ಅದು ಸಾರ್ವಜನಿಕ ಶಿಕ್ಷಣ ನೀತಿಯ ವೈಫಲ್ಯ ಹಾಗೂ ಸರ್ಕಾರಕ್ಕೆ ಸ್ಪಷ್ಟವಾದ ಸಾಮಾಜಿಕ–ಸಾಂಸ್ಕೃತಿಕ ನೀತಿ ಇಲ್ಲದಿರುವುದರ ಫಲಶ್ರುತಿ. ವಿಲೀನದ ಪ್ರಸ್ತಾಪವನ್ನು ಕೈಬಿಟ್ಟು, ಸರ್ಕಾರಿ ಶಾಲೆಗಳನ್ನು ಬಲಪಡಿಸುವ ಸಾಧ್ಯತೆಗಳತ್ತ ಸರ್ಕಾರ ಗಮನಹರಿಸಬೇಕು.

**■ ರಘುನಾಥ ಚ.ಹ.**



ಈಶ್ವರ್